**ಕರ್ನಾಟಕ ಸರ್ಕಾರ**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20** **ದಿನಾಂಕ : 13–09–2019**

## SPECIAL MEDIA INVITATION

**The President of the 12th Group of Ministers on Information Technology implementation in Goods and Services Tax Mr Susheel Kumar Modi, who is also the Deputy Chief Minister of Bihar, has desired to meet Media Persons on September 14 at 2-15 P M at West Minister Banquet Hall at I T C Windsor Hotel on Golf Course Road.**

**Media Persons, representing both Electronic and Print Media, are requested to kindly attend and give wide coverage to this Important Press Conference.**

**D. P. MURALIDHAR**
**DEPUTY DIRECTOR (NEWS)**

## SPECIAL MEDIA INVITATION

**The Union Minister for Health and Family Welfare Dr Harsh Vardhan, who is also the President of National Institute of Mental Health and Neurosciences ( NIMHANS ) will preside over 24th Convocation of NIMHANS on September 16 at 3-00 P M at NIMHAN's Convention Centre on Hosur Road.**

**The Chief Minister of Karnataka Mr B S Yediyurappa, who is also the Minister for Medical Education and Vice-President of NIMHANS**

**Media Persons, representing both Electronic and Print Media, are requested to kindly attend and give wide coverage to this Special Function.**

**D. P. MURALIDHAR**
**DEPUTY DIRECTOR (NEWS)**

## <u>ಪತ್ರಿಕಾ ಪ್ರಕಟಣೆ</u>

# ಸೆಪ್ಟೆಂಬರ್ 16 ರಂದು ನಿಮಾನ್ಸ್ 24 ನೇ ಘಟಿಕೋತ್ಸವ

**ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ ) :**

ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ (ನಿಮಾನ್ಸ್) ಸೆಪ್ಟೆಂಬರ್ 16 ರಂದು ತನ್ನ 24 ನೇ ಘಟಿಕೋತ್ಸವ ಸಮಾರಂಭವನ್ನು ಆಯೋಜಿಸಿದೆ.

ಘಟಿಕೋತ್ಸವ ಸಮಾರಂಭವು ಅಂದು ಮಧ್ಯಾಹ್ನ 3-00 ಗಂಟೆಗೆ ಹೊಸೂರು ರಸ್ತೆಯ ನಿಮಾನ್ಸ್‌ನ ಸಮಾವೇಶ ಕೇಂದ್ರದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಡಾ: ಹರ್ಷವರ್ಧನ್ ಮಾಡಲಿದ್ದಾರೆ ಎಂದು ಸಂಸ್ಥೆಯ ನಿರ್ದೇಶಕ ಡಾ: ಬಿ.ಎನ್. ಗಂಗಾಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ ) :**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ಸೆಪ್ಟೆಂಬರ್ 15 ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನ ( ಕಬ್ಬನ್ ಉದ್ಯಾನ ) ದ ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ.

ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಈ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆಸಿಕೊಳ್ಳಲು ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಪದ್ಮಶ್ರೀ. ಕೆ. ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಬಾಲಭವನ ಸೊಸೈಟಿ ಸಹಯೋಗದೊಂದಿಗೆ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ ಇಂದಿರಾನಗರ ಸಂಗೀತ ಸಭಾ ಸಂಸ್ಥೆಯ ಮಕ್ಕಳಿಂದ ತಬಲ ಮತ್ತು ಮೃದಂಗ ವಾದನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

## ಸಚಿವರ ಪ್ರವಾಸ

ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ ) :

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವ ಶ್ರೀ ಎಸ್. ಸುರೇಶ್‌ಕುಮಾರ್ ಅವರು ಸೆಪ್ಟೆಂಬರ್ 14 ರಂದು ರಾಮನಗರ, ಮಂಡ್ಯ ಚಾಮರಾಜನಗರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.

## ರಾಜ್ಯ ಜಾಹೀರಾತು ನೀತಿ ಪರಿಷ್ಕರಣೆ : ಸಲಹೆಗಳ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ ) :**

ರಾಜ್ಯದ ಜಾಹೀರಾತು ನೀತಿ – 2013 ಅನುಷ್ಠಾನ ನಿಯಮಗಳು 2014 ಜಾರಿಗೆ ಬಂದು ಐದು ವರ್ಷಗಳು ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ನಿಯಮಗಳನ್ನು ಪರಿಷ್ಕರಿಸಲು ಯೋಜಿಸಲಾಗಿದೆ.

ಆದಕಾರಣ, ಜಾಹೀರಾತು ನೀತಿ –2013 ಅನುಷ್ಠಾನ ನಿಯಮಗಳು 2014 ರ ಪರಿಷ್ಕರಣೆ ಸಂಬಂಧ ರಾಜ್ಯದಲ್ಲಿರುವ ಪತ್ರಿಕಾ ಸಂಘಟನೆಗಳಿಂದ ಸಲಹೆಗಳನ್ನು ಆಹ್ವಾನಿಸಲಾಗಿದೆ.

ಜಾಹೀರಾತು ಅನುಷ್ಠಾನ ನಿಯಮಗಳ ಪರಿಷ್ಕರಣೆ ಸಂಬಂಧ ಸಲಹೆಗಳನ್ನು ಲಿಖಿತವಾಗಿ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾ ಸೌಧ, ಸಂಖ್ಯೆ : 17 ಭಗವಾನ್ ಮಹಾವೀರ ರಸ್ತೆ, ( ಇನ್‌ಫೆಂಟ್ರಿ ರಸ್ತೆ ) ಬೆಂಗಳೂರು – 560 001 ಅವರಿಗೆ ಸೆಪ್ಟೆಂಬರ್ 30 ರೊಳಗಾಗಿ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸೆಪ್ಟೆಂಬರ್ 17 ರಂದು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯದ ಕಲಬುರಗಿ ಪೀಠ ಉದ್ಘಾಟನೆ

**ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ ) :**

ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಕಲಬುರಗಿ ಪೀಠದ ಉದ್ಘಾಟನೆ ಸೆಪ್ಟೆಂಬರ್ 17 ರಂದು ಅಲ್ಲಿನ ಜಿಲ್ಲಾ ನ್ಯಾಯಾಲಯದ ಪ್ರಾಂಗಣದಲ್ಲಿ ನಡೆಯಲಿದೆ.

ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ಅವರು ಉದ್ಘಾಟಿಸಲಿರುವ ಈ ಸಮಾರಂಭದಲ್ಲಿ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಖಾತೆ ಹೊತ್ತ ಉಪ ಮುಖ್ಯಮಂತ್ರಿ ಗೋವಿಂದ ಎಂ. ಕಾರಜೋಳ, ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವ ಜೆ. ಸಿ. ಮಾಧುಸ್ವಾಮಿ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ ಅಧ್ಯಕ್ಷ ನ್ಯಾಯಮೂರ್ತಿ ಡಾ ಕೆ. ಭಕ್ತವತ್ಸಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೃತ್ತಿರಂಗಭೂಮಿ ಕಾಯಕಲ್ಪ ಯೋಜನೆಯಡಿ ಧನ ಸಹಾಯಕ್ಕಾಗಿ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 13 ( ಕರ್ನಾಟಕ ವಾರ್ತೆ ) :**

**ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ 2019-20 ನೇ ಸಾಲಿಗೆ ವೃತ್ತಿರಂಗಭೂಮಿ ಕಾಯಕಲ್ಪ ಯೋಜನೆಯಡಿ ಧನಸಹಾಯಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

**ಕನಿಷ್ಠ ಐದು ವರ್ಷಗಳನ್ನು ಪೂರೈಸಿರುವ ನೋಂದಾಯಿತ ವೃತ್ತಿ ನಾಟಕ ಕಂಪನಿಗಳು ನಿಗಧಿತ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಅಗತ್ಯ ದಾಖಲೆಗಳನ್ನು ಲಗತ್ತಿಸಿ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಭವನ, ಜಯ ಚಾಮರಾಜೇಂದ್ರ ರಸ್ತೆ, ಬೆಂಗಳೂರು - 560 002 ಇವರಿಗೆ ಸೆಪ್ಟೆಂಬರ್ 30 ರಂದು ಸಂಜೆ 5-30 ಗಂಟೆಯೊಳಗೆ ಸಲ್ಲಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## Monthly Science Movie

Bengaluru, September 13(Karnataka Information)

Jawaharlal Nehru Planetarium, Bengaluru is organizing the following programmes for public. Monthly Science Movie for public is scheduled on 15th September 2019 at 5-30 p.m.

A special talk on account of Teacher's Day celebration on the topic Nature of Changes Needed in Science education is on 14th September 2019 at 10-30 p.m. for high school teachers. Entry is free. The participation should be confirmed by registering by email info@taralaya.org For details Contact : 22379725, 22266084.

***********

.